# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಮುಅ(ಘತ್ಯಾನಿ)/ಪಿಆರ್/838/12-13

ಆಯುಕ್ತರು ರವರ ಕಛೇರಿ,
ನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 17-10-2012.

## ಸುತ್ತೋಲೆ

ವಿಷಯ: ಬೆಂಗಳೂರಿನ ಸುತ್ತಮುತ್ತಲಿನ ರೈತಾಪಿ ಜನರಿಗೆ ಹಸಿ ತ್ಯಾಜ್ಯವನ್ನು ನೀಡುವುದರ ಬಗ್ಗೆ.

ಉಲ್ಲೇಖ: (1) ಪಾಲಕೆ ಸಭೆಯ ವಿಷಯದ ಸಂಖ್ಯೆ:260/12-13, ದಿನಾಂಕ:29-9-2012.
(2) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ರವರ ಪತ್ರ ಸಂಖ್ಯೆ: ಕೆ.ಎಸ್.ಪಿ.ಸಿ.ಬಿ/ಸಿ.ಹೆಚ್/ಎಂ.ಎಸ್.ಡಬ್ಲ್ಯೂ/ಬಿಬಿಎಂಪಿ/2012, ದಿನಾಂಕ:28-9-2012.

----

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ವಲಯಗಳಲ್ಲಿ ಘನತ್ಯಾಜ್ಯ ವಿಂಗಡಣೆಯನ್ನು ಕಡ್ಡಾಯಗೊಳಿಸಲಾಗಿದ್ದು, ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ಸಂಗ್ರಹಿಸುವುದು ಹಾಗೂ ವಿಲೇವಾರಿ ಮಾಡುವುದು ಪಾಲಿಕೆಯ ಕರ್ತವ್ಯವಾಗಿರುತ್ತದೆ. ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಸ ವಿಲೇವಾರಿಯು ಒಂದು ಜ್ವಲಂತ ಸಮಸ್ಯೆಯಾಗಿ ಪರಿಣಮಿಸಿದ್ದು, ಹಲವಾರು ದಿನಪತ್ರಿಕೆಗಳು, ಮಾಧ್ಯಮಗಳು ಮತ್ತು ಪರಿಸರವಾದಿಗಳು, ಘನ ತ್ಯಾಜ್ಯ ವಿಲೇವಾರಿ ಘಟಕಗಳ ಸುತ್ತಮುತ್ತಲಿನ ಗ್ರಾಮಗಳ ಜನರು ಘನ ತ್ಯಾಜ್ಯ ವಿಲೇವಾರಿ ಘಟಕಗಳ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದು, ಮಾವಳ್ಳಿಪುರ, ಸುಬ್ಬರಾಯನಪಾಳ್ಯ, ಅಂಜನಾಪುರ ಮತ್ತು ಚೀಮಸಂದ್ರ ತ್ಯಾಜ್ಯ ವಿಲೇವಾರಿ ಘಟಕಗಳನ್ನು ಸಂಪೂರ್ಣವಾಗಿ ನಿಲ್ಲಿಸಲಾಗಿರುತ್ತದೆ. ಆದರೆ ಬೆಂಗಳೂರಿನಲ್ಲಿ ಉತ್ಪತ್ತಿಯಾಗುತ್ತಿರುವ ಘನತ್ಯಾಜ್ಯವನ್ನು ವಿಲೇವಾರಿ ಮಾಡುವ ಅನಿವಾರ್ಯ ಪ್ರಸಂಗ ಒದಗಿ ಬಂದಿದ್ದು, ಹಾಲಿ ಇರುವ ಘನತ್ಯಾಜ್ಯ ವಸ್ತು ವಿಲೇವಾರಿ ಘಟಕಗಳು ಸಾರ್ವಜನಿಕರ ಆಕ್ರೋಶಕ್ಕೆ ತುತ್ತಾಗಿದ್ದು ಅವುಗಳನ್ನು ವೈಜ್ಞಾನಿಕವಾಗಿ ಸಂಸ್ಕರಣೆ ಮಾಡುವುದು ಅವಶ್ಯಕವಾಗಿರುತ್ತದೆ. ಈ ಘಟಕಗಳ ಮೇಲೆ ಇರುವ ಒತ್ತಡವನ್ನು ಅಂದರೆ ಕಸ ವಿಲೇವಾರಿ ಪ್ರಮಾಣವನ್ನು ತಗ್ಗಿಸಬೇಕಾಗಿದ್ದು, ಹಸಿ ಕಸವನ್ನು ಬೆಂಗಳೂರಿನ ಸುತ್ತಮುತ್ತಲಿನ ರೈತಾಪಿ ಜನರಿಗೆ ನೀಡಲು ಉಲ್ಲೇಖ (2) ರ ಪತ್ರದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ರವರು ಪ್ರತಿ ಎಕರೆಗೆ ಪ್ರತಿ ವರ್ಷಕ್ಕೆ 20 ಟನ್‌ಗಳಷ್ಟು ಹಸಿ ತ್ಯಾಜ್ಯವನ್ನು ನೀಡಲು ಒಪ್ಪಿಗೆ ನೀಡಿರುತ್ತಾರೆ. ಈ ರೀತಿ ವಿಲೇವಾರಿ ಮಾಡುವ ಹಸಿ ತ್ಯಾಜ್ಯಕ್ಕೆ ಪಾಲಿಕೆಯಿಂದ ಒಂದು ಟನ್‌ಗೆ ರೂ.66-00 ಗಳಂತೆ ಸಂಸ್ಕರಣಾ ವೆಚ್ಚ ನೀಡಲು ಹಾಗೂ ರೈತರಿಗೆ ಒಂದು ಎಕರೆಗೆ 20 ಟನ್‌ಗಳಂತೆ ಪ್ರತಿ ವರ್ಷಕ್ಕೆ ನೀಡಲು ಉಲ್ಲೇಖ (1) ರಲ್ಲಿ ಪಾಲಿಕೆ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ.

Office of the I T Advisor
No. 675
Date. 18/10/12
Bangalore Mahanagara Palike

Computer - No - 17
Pl - publish
18/10/12
Manager (IT)

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಎಲ್ಲಾ ವಲಯ ಅಪರ/ಜಂಟಿ ಆಯುಕ್ತರು, ಮುಖ್ಯ ಅಭಿಯಂತರರು/ಅಧೀಕ್ಷಕ ಅಭಿಯಂತರರುಗಳು ಹೆಚ್ಚಿನ ಮುತುವರ್ಜಿ ವಹಿಸಿ ನೇರವಾಗಿ ರೈತರಿಗೆ ಹಸಿ ತ್ಯಾಜ್ಯವನ್ನು ನೀಡಲು ಕ್ರಮ ವಹಿಸುವುದು. ರೈತರಿಗೆ ನೀಡುವ ಹಸಿ ತ್ಯಾಜ್ಯದ ಪ್ರಮಾಣ ಮತ್ತು ಅವರು ಪಾಲಿಕೆಯಿಂದ ಪಡೆದಿರುವ ಹಣದ ಮೊತ್ತವನ್ನು ನಿಗದಿತ ನಮೂನೆಯಲ್ಲಿ ಪಡೆದುಕೊಂಡು ಎಲ್ಲಾ ವಿವರಗಳನ್ನು ಆಯಾ ವಲಯಗಳಲ್ಲಿ ಪ್ರತ್ಯೇಕ ರೆಜಿಸ್ಟರ್‌ಗಳಲ್ಲಿ ದಾಖಲಿಸಿಕೊಳ್ಳುವುದು. ಪ್ರತಿದಿನ ರೈತರಿಗೆ ನೀಡಲಾದ ಹಸಿ ತ್ಯಾಜ್ಯದ ಪ್ರಮಾಣ ಹಾಗೂ ಪಾವತಿಸಿದ ಹಣದ ವಿವರಗಳನ್ನು ಮುಖ್ಯ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಇವರಿಗೆ ಇಮೇಲ್ ವಿಳಾಸ: **bbmpswmcompost@yahoo.com** ಗೆ ತಪ್ಪದೇ ಕಳುಹಿಸಲು ಆದೇಶಿಸಿದೆ.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪ್ರತಿಯನ್ನು:

1. ಪೂಜ್ಯ ಮಹಾಪೌರರ ಗಮನಕ್ಕೆ ತರಲು ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸಿದೆ.
2. ಮಾನ್ಯ ಉಪ ಮಹಾಪೌರರ ಗಮನಕ್ಕೆ ತರಲು ಆಪ್ತ ಸಹಾಯಕರಿಗೆ ಕಳುಹಿಸಿದೆ.
3. ವಿಶೇಷ ಆಯುಕ್ತರು (ಯೋಜನೆ) ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4. ಪ್ರಧಾನ ಅಭಿಯಂತರರು ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
5. ಅಪರ ಆಯುಕ್ತರು (ಆಡಳಿತ) ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
6. ಅಪರ ಆಯುಕ್ತರು (ಘ.ತ್ಯಾನಿ) ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
7. ಮುಖ್ಯ ಲೆಕ್ಕಾಧಿಕಾರಿಯವರಿಗೆ ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8. ಜಂಟಿ ನಿಯಂತ್ರಕರು (ಹಣಕಾಸು)(ಸಂಪನ್ಮೂಲ & ಯೋಜನೆ) ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
9. ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸುತ್ತಾ ಎಲ್ಲಾ ಸ್ಥಾಯಿ ಸಮಿತಿ ಅಧ್ಯಕ್ಷರ ಗಮನಕ್ಕೆ ತರಲು ಸೂಚಿಸಿದೆ.
10. ಎಲ್ಲಾ ವಲಯ ಅಪರ/ಜಂಟಿ ಆಯುಕ್ತರು ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
11. ಎಲ್ಲಾ ವಲಯ ಉಪ ಆಯುಕ್ತರು ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
12. ಎಲ್ಲಾ ವಲಯ ಮುಖ್ಯ ಅಭಿಯಂತರರು ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
13. ಎಲ್ಲಾ ವಲಯ ಅಧೀಕ್ಷಕ ಅಭಿಯಂತರರುಗಳಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
14. ಮುಖ್ಯ ಅಭಿಯಂತರರು (ಘನ ತ್ಯಾಜ್ಯ ನಿರ್ವಹಣೆ) ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
15. ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಕಳುಹಿಸುತ್ತಾ ಸದರಿ ಸುತ್ತೋಲೆಯನ್ನು ಪಾಲಿಕೆಯ ಅಂತರ್ಜಾಲದಲ್ಲಿ ಅಪ್‌ಲೋಡ್ ಮಾಡಲು ಸೂಚಿಸಿದೆ.
16. ಕಛೇರಿ ಪ್ರತಿ